| Deposition Sheets (RP.No.57) Form No.4 |
|---|

**IN THE COURT OF PRL. CIVIL JUDGE & J.M.F.C., KARKALA.**

**Criminal Case No. 1952/2024**

ಸಾಕ್ಷಿದಾರನ ಹೆಸರು ಃ ವಿಠಲ ಪಿ.ಡಬ್ಲ್ಯೂಃ 1

ತಂದೆಯ ಹೆಸರುಃ ಪೆರ್ಣ ಮುಗೇರ ಸಿ.ಡಬ್ಲ್ಯೂಃ 2

ಪ್ರಾಯ ಃ 40 ವರ್ಷ

ಉದ್ಯೋಗ ಃ ಕೂಲಿ

ವಾಸ ಃ ಪಳ್ಳಿ

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು. ದಿಃ 14-05-2025

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-**

ಆರೋಪಿಯನ್ನು ನೋಡಿದರೆ ಗುರುತಿಸಲು ಸಾಧ್ಯವಿಲ್ಲ. ಚಾಸಾ-1,3 ಮತ್ತು 4 ಪರಿಚಯ ಇಲ್ಲ.

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿರುವುದಿಲ್ಲ. ನಾನು ಯಾವುದೇ ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿರುವುದಿಲ್ಲ. ಅಪಘಾತದಿಂದ ಯಾರು ಯಾರಿಗೆ ಪೆಟ್ಟಾಗಿರುತ್ತದೆ, ಯಾರು ಮೃತ ಪಟ್ಟಿರುತ್ತಾರೆ ಎಂದು ಗೊತ್ತಿರುವುದಿಲ್ಲ. ಅಪಘಾತ ಯಾವ ವಾಹನಗಳ ನಡುವೆ ಸಂಭವಿಸಿರುತ್ತದೆ ಎಂದು ಗೊತ್ತಿರುವುದಿಲ್ಲ. ನಾನು ಯಾರನ್ನು ಉಪಚರಿಸಿರುವುದಿಲ್ಲ. ನನಗೆ ಅಪಘಾತಕ್ಕೆ ಏನೂ ಕಾರಣ ಎಂದು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿ ನಕ್ಷೆ ತಯಾರಿಸಿ ಭಾವಚಿತ್ರ ತೆಗೆದಿರುವುದಿಲ್ಲ ಹಾಗೂ ಯಾವುದೇ ಸೊತ್ತುಗಳನ್ನು ಸ್ವಾಧೀನ ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಸ್ಥಳ ಮಹಜರು ಹಾಗೂ ಸೊತ್ತು ಸ್ವಾಧೀನತಾ ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿದ್ದು ಯಾವ ಉದ್ದೇಶಕ್ಕಾಗಿ ಮಾಡಿರುತ್ತೇನೆ ಎಂದು ಗೊತ್ತಿರುವುದಿಲ್ಲ.

ಸಾಕ್ಷಿಯು ಮಹಜರು ವೇಳೆ ತೆಗೆದಿರುವ ಭಾವಚಿತ್ರ ಹಾಗೂ ತಕ್ಷೀರಿಗೆ ಸಂಬಂಧಿಸಿದ ವಾಹನಗಳ ಭಾವಚಿತ್ರ ನೋಡಿ ಗುರುತಿಸಿರುವುದಿಲ್ಲ. ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>ಪಾಟೀ ಸವಾಲು :</u> **<u>ಸಹಾಯಕ ಸರ್ಕಾರಿ ಅಭಿಯೋಜಕರುಃ-</u>**

ದಿಃ 20-05-2024 ರಂದು ಪೊಲೀಸರು ನಾನು ತೋರಿಸಿಕೊಟ್ಟಂತೆ ಚಾಸಾ-5 ಮತ್ತು 6 ರವರ ಸಮಕ್ಷಮ ಮಧ್ಯಾಹ್ನ 2.30 ರಿಂದ 3.30 ರವರೆಗೆ ಸ್ಥಳ ಮಹಜರು ಹಾಗೂ ಸೊತ್ತು ಸ್ವಾಧೀನತಾ ಮಹಜರು ಮಾಡಿ ನಕ್ಷೆ ತಯಾರಿಸಿ, ಭಾವಚಿತ್ರ ತೆಗೆದು ತಕ್ಷೀರಿಗೆ ಸಂಬಂಧಿಸಿದ ವಾಹನಗಳನ್ನು ಸ್ವಾಧೀನ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ ಹಾಗೂ ಸ್ಥಳದಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಈಗ ನನಗೆ ಓದಿ ಹೇಳಿದಂತೆ ದಿನಾಂಕ 20-05-2024 ರಂದು ನಾನು ಪೊಲೀಸರ ಮುಂದೆ ಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು :</u> ಆರೋಪಿ ಪರ : ಶ್ರೀ ಪಿ.ಎಮ್.ಪಿ. ವಕೀಲರಿಂದ ಃ ಏನು ಇಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ

Learned APP filed memo praying to issue s/s to the CW 5 to 14. As the eye witness Pw 1 to 4 have completly turned hostile to the case of prosecution. No purpose will be served by issuance of summons to CW 5 to 14. Hence by rejecting the prayer of learned APP evidence of CW 5 to 14 are dropped and closed prosecution side evidence and posted for 313 statement.

As there are no incriminating evidences against the accused recording of 313 statement is dispensed. Posted for Arguments.

Call on 14-07-2023.

Prl. Civil Judge & JMFC.
Karkala

Accused absent. E.P filed and allowed for a day. CW1 to 3 present and examined as PW1 to 3 and

got marked Ex.P1 and 12. and 1(a) to 4(a,. 9(a)

Learned APP filed memo, praying to issue s/s to the CW4 to 17. As the eye witness and victim witness CW1 to 3 have completly turned hostile to the case of prosecution and the parties are relatives and submitted the matter is settled b/w the .Hence no purpose will be served by issuance of summons to CW4 to 17. Who are hearsay witness, mahazar witness and official witness. Hence by rejecting the prayer of learned APP. Evidence of CW4 to 17 are dropped and closed prosecution side evidence and posted for 313 statement.

As there are no incriminating evidences against the accused recording of 313 statement is dispensed and posted for

compliance Under 437A and Arguments.

Call on : 17.08.2021

Prl. Civil Judge & JMFC.
Karkala